**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೇಶವ ಪ್ರಸಾದ ಇವರು ಶೂನ್ಯ ವೇಳೆಯ ಪ್ರಸ್ತಾವ ಸಂಖ್ಯೆ:08 ಕ್ಕೆ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಉತ್ತರ.**

*****

ಸೂಚನೆ:

ಇಪತ್ತಿನ ಕನ್ನಡಪ್ರಭ ಸಂಪಾದಕೀಯದಲ್ಲಿ ಹೊಸದಾಗಿ ರೇಷನ್ ಕಾರ್ಡ್‌ಗಳನ್ನು ನೀಡದಿರುವುದರಿಂದ ಬಡವರು ಕಲ್ಯಾಣ ಯೋಜನೆಗಳನ್ನು ಪಡೆಯಲು ತೊಂದರೆಯಾಗುತ್ತಿದೆ ಎಂದು ಉಲ್ಲೇಖಿಸಿರುತ್ತಾರೆ. ಬಿಪಿಎಲ್ ಹಾಗೂ ಅಂತ್ಯೋದಯ ಕಾರ್ಡ್‌ಗಳನ್ನು ಪಡೆಯಲು ಅರ್ಜಿದಾರರು ಇಲಾಖಾ ವೆಬ್‌ಸೈಟ್ ಹೋಗಿ ಅರ್ಜಿ ಹಾಕಲು ಪ್ರಯತ್ನಿಸಿದರೂ ಸಾಧ್ಯವಾಗುತ್ತಿಲ್ಲ ಎಂಬ ಕಾರಣಕ್ಕೆ ಹೊಸ ಕಾರ್ಡ್ ಪಡೆಯಲಾಗುತ್ತಿಲ್ಲ. ಇದರಿಂದ ಅವಿಭಕ್ತ ಕುಟುಂಬಗಳು ಸೇರಿದಂತೆ ಸಾವಿರಾರು ಕುಟುಂಬಗಳು ತೊಂದರೆ ಅನುಭವಿಸುತ್ತಿವೆ. ಹೊಸ ಕಾರ್ಡ್‌ಗೆ ಅರ್ಜಿ ಹಾಕಲು ತೊಂದರೆಯಾಗುತ್ತಿರುವುದರಿಂದ ಹುಟ್ಟಿದ ಮಗುವಿನ ಸೇರ್ಪಡೆ, ತೀರಿ ಹೋದವರ ಹೆಸರನ್ನು ತೆಗೆಸಲು ಆಗುತ್ತಿಲ್ಲ ಕಾಗುಣಿತ ತಿದ್ದುಪಡಿ ಸಹ ಸಾಧ್ಯವಾಗುತ್ತಿಲ್ಲ. ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಲು ರಾಜ್ಯದಲ್ಲಿ ಸಾವಿರಾರು ಅರ್ಜಿದಾರರು ಕಾಯುತ್ತಿದ್ದು, ಅಲ್ಲದೆ ಕಾರ್ಡ್‌ನ್ನು ತಿದ್ದುಪಡಿ ಮಾಡಲು ಆಹಾರ ನಾಗರಿಕ ಸರಬರಾಜು ಸಚಿವರು ಅನುವು ಮಾಡಿಕೊಡಬೇಕೆಂದು ಅಲ್ಲದೆ ಅರ್ಜಿ ಹಾಕಿ ಕಾಯುತ್ತಿರುವ ಅರ್ಜಿಯನ್ನು ಸಮಗ್ರವಾಗಿ ಪರಿಶೀಲಿಸಿ ಅರ್ಹ ಕುಟುಂಬಗಳಿಗೆ ಶೀಘ್ರದಲ್ಲಿ ರೇಷನ್ ಕಾರ್ಡ್‌ಗಳನ್ನು ವಿತರಣೆ ಮಾಡಬೇಕೆಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವರನ್ನು ಆಗ್ರಹಿಸಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

ಉತ್ತರ:

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯನ್ವಯ ನಗರ ಪ್ರದೇಶದ ಶೇ.50ರಷ್ಟು ಹಾಗೂ ಗ್ರಾಮೀಣ ಪ್ರದೇಶದ ಶೇ.75ರಷ್ಟು ವಾಸಿಗಳು ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿರುತ್ತಾರೆ. ಅದರಂತೆ, 2011ರ ಜನಗಣತಿ ಪ್ರಕಾರ ಕೇಂದ್ರ ಸರ್ಕಾರವು ಅಂತ್ಯೋದಯ ಮತ್ತು ಆದ್ಯತಾ ಪಡಿತರ ಚೀಟಿಯನ್ನು ಹೊಂದಲು 4,01,00,000 ಜನಸಂಖ್ಯೆಯನ್ನು ನಿಗದಿಪಡಿಸಿದೆ ಹಾಗೂ ಪ್ರತಿ ತಿಂಗಳು 2,17,403 ಮೆಟ್ರಿಕ್ ಟನ್ ಆಹಾರ ಧಾನ್ಯವನ್ನು ಒದಗಿಸುತ್ತಿದೆ. ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಜನಸಂಖ್ಯೆಯನ್ವಯ ರಾಜ್ಯದಲ್ಲಿ ದಿನಾಂಕ:10.07.2023 ರಲ್ಲಿದ್ದಂತೆ 10,90,990 ಅಂತ್ಯೋದಯ ಅನ್ನ ಯೋಜನೆ ಪಡಿತರ ಚೀಟಿಯನ್ನು ವಿತರಿಸಲಾಗಿದ್ದು, ಇದರಲ್ಲಿ 44,77,231 ಫಲಾನುಭವಿಗಳಿದ್ದು, 1,02,87,711 ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸಲಾಗಿದ್ದು, ಇದರಲ್ಲಿ 3,57,48,566 ಫಲಾನುಭವಿಗಳಿರುತ್ತಾರೆ.

ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ಜನಸಂಖ್ಯಾ ಪ್ರಮಾಣ ಮೀರಿ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 14,36,008 ಆದ್ಯತಾ ಪಡಿತರ ಚೀಟಿಗಳನ್ನು ವಿತರಸಲಾಗಿದ್ದು, ಇದರಲ್ಲಿ 39,25,525 ಫಲಾನುಭವಿಗಳಿರುತ್ತಾರೆ. ಆದ್ಯತಾ ಪಡಿತರ ಚೀಟಿಯನ್ನು ಕೋರಿ ನಿರಂತರವಾಗಿ ಅರ್ಜಿಗಳು ಸಲ್ಲಿಕೆಯಾಗುತ್ತಿದ್ದು, ಸದರಿ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಅರ್ಜಿದಾರರ ಕುಟುಂಬಗಳಿಗೆ ಪಡಿತರ ಚೀಟಿಯನ್ನು ವಿತರಿಸಲಾಗಿದೆ ಹಾಗೂ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ. ಇದರೊಂದಿಗೆ ಕಳೆದ ಸಾಲಿನಲ್ಲಿ ಅನರ್ಹರು ಹೊಂದಿರುವ ಅಂದಾಜು 4,32,386 ಆದ್ಯತಾ/ ಅಂತ್ಯೋದಯ ಪಡಿತರ

ಚೀಟಿಗಳನ್ನು ರದ್ದುಪಡಿಸಲಾಗಿದ್ದು, ಇದಕ್ಕೆ ಎದುರಾಗಿ ಆದ್ಯತಾ ಪಡಿತರ ಚೀಟಿಯನ್ನು ಹೊಂದಲು ಅರ್ಹರಿಂದ 4,32,386 ಕುಟುಂಬಗಳಿಗೆ ಆದ್ಯತಾ ಪಡಿತರ ಚೀಟಿಯನ್ನು ವಿತರಿಸಲಾಗಿದ್ದು, ಪ್ರಸ್ತುತ ವಿತರಿಸಲಾಗಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳಲ್ಲಿ ರಾಜ್ಯದ ಶೇಕಡಾ 75 ರಷ್ಟು ಜನಸಂಖ್ಯೆ ಫಲಾನುಭವಿಗಳಾಗಿರುತ್ತಾರೆ.

2023ನೇ ಸಾಲಿನಲ್ಲಿ ಕರ್ನಾಟಕ ವಿಧಾನಸಭೆ ಚುನಾವಣೆ ಘೋಷಣೆಯಾದ ಹಿನ್ನಲೆಯಲ್ಲಿ ನೀತಿಸಂಹಿತೆ ಜಾರಿಯಲ್ಲಿದ್ದರಿಂದ ಹೊಸ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಕೆ, ಹೊಸ ಪಡಿತರ ಚೀಟಿ ವಿತರಣೆ, ಪಡಿತರ ಚೀಟಿಗಳಲ್ಲಿನ ಮಾರ್ಪಾಡು ಮಾಡುವ ಪ್ರಕ್ರಿಯೆಯನ್ನು ಇದುವರೆಗೂ ಸ್ಥಗಿತಗೊಳಿಸಲಾಗಿರುತ್ತದೆ. ಪ್ರಸ್ತುತ ಸರ್ಕಾರವು ಅನ್ನಭಾಗ್ಯ, ಗೃಹಲಕ್ಷ್ಮಿ ಮತ್ತು ಗೃಹ ಜ್ಯೋತಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಈ ಯೋಜನೆಗಳಿಗೆ ಸಂಬಂಧಿಸಿದಂತೆ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ದತ್ತಾಂಶವನ್ನು ಬಳಸಿಕೊಳ್ಳಲಾಗುತ್ತಿರುವ ಹಿನ್ನಲೆಯಲ್ಲಿ ಹೊಸ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಕೆ, ಹೊಸ ಪಡಿತರ ಚೀಟಿ ವಿತರಣೆ, ಪಡಿತರ ಚೀಟಿಗಳಲ್ಲಿನ ಮಾರ್ಪಾಡು ಮಾಡುವ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ.

ಈಗಾಗಲೇ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ 14,36,008 ಆದ್ಯತಾ/ ಅಂತ್ಯೋದಯ ಪಡಿತರ ಚೀಟಿಗಳನ್ನು ವಿತರಿಸಲಾಗಿರುವ ಹಿನ್ನಲೆಯಲ್ಲಿ ಹೊಸದಾಗಿ ರಾಜ್ಯ ಸರ್ಕಾರದ ವತಿಯಿಂದ ಆದ್ಯತಾ ಪಡಿತರ ಚೀಟಿಗಳನ್ನು ವಿತರಿಸುವ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಕ್ರಮವಹಿಸಲಾಗುವುದು. ಅನ್ನಭಾಗ್ಯ ಯೋಜನೆಯಡಿ ಪಡಿತರ ಫಲಾನುಭವಿಗಳ ಕುಟುಂಬದ ಮುಖ್ಯಸ್ಥರ ಖಾತೆಗೆ DBT ಮೂಲಕ ಹಣ ವರ್ಗಾಯಿಸುವ ಕಾರ್ಯ ಚಾಲ್ತಿಯಲ್ಲಿದ್ದು, ಈ ಪ್ರಕ್ರಿಯೆ ಪೂರ್ಣವಾದ ನಂತರ ಹೊಸ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಕೆ, ಹೊಸ ಪಡಿತರ ಚೀಟಿ ವಿತರಣೆ, ಪಡಿತರ ಚೀಟಿಗಳಲ್ಲಿನ ಮಾರ್ಪಾಡು ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುವುದು.

ಆನಾಸ 144 ಡಿಆರ್‌ಎ 2023 (ಇ-ಆಫೀಸ್)

(ಕೆ.ಹೆಚ್ ಮುನಿಯಪ್ಪ)

ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು
ಮಾಪನಶಾಸ್ತ್ರ ಇಲಾಖಾ ಸಚಿವರು